## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 56 (510) |
| ಮಾನ್ಯ ಸದಸ್ಯರ ಹೆಸರು | : | ಶ್ರೀ ತಿಪ್ಪಣ್ಣಪ್ಪ ಕಮಕನೂರ |
| ಉತ್ತರಿಸುವ ದಿನಾಂಕ | : | 30-01-2026 |
| ಉತ್ತರಿಸುವ ಸಚಿವರು | : | ಸಮಾಜ ಕಲ್ಯಾಣ ಸಚಿವರು |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿ (KKRDB) ಮೂಲಕ ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ಕಲಬುರಗಿ ಜಿಲ್ಲೆಯಲ್ಲಿ ಕೈಗೆತ್ತಿಕೊಂಡಿರುವ ವಿಶೇಷ ಯೋಜನೆಗಳಾವುವು; | ಕಲಬುರಗಿ ಜಿಲೆಯಲ್ಲಿ ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯ ಮೂಲಕ **ಸಮಾಜ ಕಲ್ಯಾಣ ಇಲಾಖೆಯ ಆಯುಕ್ತಾಲಯದ** ವತಿಯಿಂದ ಈ ಕೆಳಕಂಡ ಯೋಜನೆಗಳನ್ನು ಕೈಗೊಳ್ಳಲಾಗಿರುತ್ತದೆ.<br>1. ಡಾ.ಬಿ.ಆರ್.ಅಂಬೇಡ್ಕರ್ ಸರ್ಕಾರಿ ವಿದ್ಯಾರ್ಥಿ ನಿಲಯಗಳ ಕಟ್ಟಡ ನಿರ್ಮಾಣ.<br>2. ಪರೀಕ್ಷಾ ಪೂರ್ವ ತರಬೇತಿ ಕೇಂದ್ರದ ಒಳಗೆ ಸಿ.ಸಿ.ರಸ್ತೆ ನಿರ್ಮಾಣ, ಸಂಯುಕ್ತ ಗೋಡೆ ನಿರ್ಮಾಣ, ಉದ್ಯಾನ ಅಭಿವೃದ್ಧಿ ಕಾಮಗಾರಿ, ಅಡುಗೆ ಕೋಣೆ ಬ್ಲಾಕ್ ಹಾಗೂ ಊಟದ ಕೊಠಡಿ, ಸಭಾಂಗಣ, ಒಳಾಂಗಣ, ತರಬೇತಿ ಕೆಲಸ ಮತ್ತು ಪೀಠೋಪಕರಣಗಳು, ಡಿಜಿಟಲ್ ಗ್ರಂಥಾಲಯ, ಪ್ರತಿಷ್ಠಿತ ಸಂಸ್ಥೆಯಿಂದ ತರಬೇತಿ, ಹೆಚ್ಚುವರಿ ಮೂಲಭೂತ ಸೌಕರ್ಯಗಳು.<br><br>**ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ** ವತಿಯಿಂದ ಕಲಬುರ್ಗಿ ಜಿಲ್ಲೆಯಲ್ಲಿ ಈ ಕೆಳಕಂಡ ವಸತಿ ಶಾಲೆಗಳ ನಿರ್ಮಾಣ ಕಾಮಗಾರಿಗಳು ಪ್ರಗತಿಯಲ್ಲಿವೆ.<br>1. ಕಲಬುರ್ಗಿ ಜಿಲ್ಲೆ, ಜೇವರ್ಗಿ ತಾಲ್ಲೂಕು, ಬಿಲವಾರ ಗ್ರಾಮದಲ್ಲಿ ಡಾ\| ಬಿ.ಆರ್. ಅಂಬೇಡ್ಕರ್ ವಸತಿ ಶಾಲಾ ಸಂಕೀರ್ಣ - ರೂ.22.00 ಕೋಟಿ .<br>2. ಕಲಬುರ್ಗಿ ಜಿಲ್ಲೆ, ಕಲಬುರ್ಗಿ ತಾಲ್ಲೂಕು ಪಟ್ಟಣ ಗ್ರಾಮದಲ್ಲಿ ಡಾ\| ಬಿ.ಆರ್. ಅಂಬೇಡ್ಕರ್ ವಸತಿ ಶಾಲಾ ಸಂಕೀರ್ಣ –ರೂ.22.00 ಕೋಟಿ.<br>3. ಕಲಬುರ್ಗಿ ಜಿಲ್ಲೆ, ಜೇವರ್ಗಿ ತಾಲ್ಲೂಕು ಫರತಾಬಾದ್ ಗ್ರಾಮದಲ್ಲಿ ಡಾ\| ಬಿ.ಆರ್. ಅಂಬೇಡ್ಕರ್ ವಸತಿ ಶಾಲೆ ನಿರ್ಮಾಣ ಕಾಮಗಾರಿ – ರೂ.22.00 ಕೋಟಿ<br>4. ಕಲಬುರ್ಗಿ ಜಿಲ್ಲೆ, ಚಿತ್ತಾಪುರ ತಾಲ್ಲೂಕು, ಚಿತ್ತಾಪುರ ಪಟ್ಟಣದಲ್ಲಿ ಮೆಟ್ರಿಕ್ ಪೂರ್ವ ಬಾಲಕರ ವಸತಿ ನಿಲಯ ನಿರ್ಮಾಣ ಕಾಮಗಾರಿ- ರೂ.12.00 ಕೋಟಿ – ಟೆಂಡರ್ ಪ್ರಕ್ರಿಯೆ ಪರಿಶೀಲನೆಯಲ್ಲಿದೆ. |
| ಆ) | ಕಲಬುರಗಿ ನಗರವು ಶೈಕ್ಷಣಿಕ ಕೇಂದ್ರವಾಗಿರುವುದರಿಂದ, ಇಲ್ಲಿಗೆ ಬರುವ ವಿದ್ಯಾರ್ಥಿಗಳ | ಕಲಬುರಗಿ ನಗರದಲ್ಲಿ ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ಸುಮಾರು 1000 ವಿದ್ಯಾರ್ಥಿಗಳ ಸಾಮರ್ಥ್ಯದ ವಿದ್ಯಾರ್ಥಿ ನಿಲಯ ಸಮುಚ್ಚಯ ಕಟ್ಟಡ ನಿರ್ಮಾಣ |

| | | |
|---|---|---|
| | ಸಂಖ್ಯೆಗೆ ಅನುಗುಣವಾಗಿ ಹೊಸ "ಮೆಗಾ ಹಾಸ್ಟೆಲ್" ನಿರ್ಮಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ? | ಕಾಮಗಾರಿಯನ್ನು 2016-17ನೇ ಸಾಲಿನಲ್ಲಿ ಕೈಗೊಂಡು 2020-21ನೇ ಸಾಲಿನಲ್ಲಿ ಪೂರ್ಣಗೊಳಿಸಲಾಗಿದ್ದು, ಸದರಿ ವಿದ್ಯಾರ್ಥಿ ನಿಲಯ ಸಮುಚ್ಚಯವು ಕಾರ್ಯನಿರ್ವಹಿಸುತ್ತಿರುತ್ತದೆ.<br><br>ಅದಲ್ಲದೇ, 2022-23ನೇ ಸಾಲಿನಲ್ಲಿ ಕಲಬುರಗಿ ನಗರದಲ್ಲಿ 1000 ವಿದ್ಯಾರ್ಥಿಗಳ ಸಾಮರ್ಥ್ಯದ ದೀನದಯಾಳ್ ಉಪಾಧ್ಯಾಯ ಸೌಹಾರ್ದ ವಿದ್ಯಾರ್ಥಿ ನಿಲಯ ಮಂಜೂರಾಗಿದ್ದು, ಸದರಿ ವಿದ್ಯಾರ್ಥಿ ನಿಲಯಕ್ಕೆ ಲೋಕೋಪಯೋಗಿ ಇಲಾಖೆಯ ವತಿಯಿಂದ ಸ್ವಂತ ಕಟ್ಟಡ ನಿರ್ಮಾಣ ಕಾಮಗಾರಿಯನ್ನು ಕೈಗೊಳ್ಳಲಾಗಿದ್ದು, ಕಾಮಗಾರಿಯು ಮುಕ್ತಾಯ ಹಂತದಲ್ಲಿರುತ್ತದೆ.<br><br>ಮುಂದುವರೆದು, ಕಲಬುರಗಿ ನಗರದಲ್ಲಿ ಹೊಸ "ಮೆಗಾ ಹಾಸ್ಟೆಲ್" ಮಂಜೂರು ಮಾಡುವ ಪ್ರಸ್ತಾವನೆಯು ಸರ್ಕಾರದ ಮುಂದಿರುವುದಿಲ್ಲ. |

**ಸಕಇ 120 ಪಕವಿ 2026**

(ಡಾ: ಹೆಚ್.ಸಿ.ಮಹದೇವಪ್ಪ)
**ಸಮಾಜ ಕಲ್ಯಾಣ ಸಚಿವರು**